ಇ) ಈ ದೇವಸ್ಥಾನಗಳ ಸರ್ವಾಂಗೀಣ ಅಭಿವೃದ್ಧಿಗೆ ವಿಶೇಷ ಕಾರ್ಯಕ್ರಮವೇನಾದರೂ ಸರ್ಕಾರ ರೂಪಿಸಿದ್ದಲ್ಲಿ, ಅದರ ವಿವರಗಳೇನು?

ಶ್ರೀಮತಿ ಸುಮಾ ವಸಂತ್ (ಮುಜರಾಯಿ ರಾಜ್ಯ ಸಚಿವರು)

ಅ) ಮಂಡ್ಯ ಜಿಲ್ಲೆಯಲ್ಲಿ ಒಟ್ಟು 1842 ಮುಜರಾಯಿ ದೇವಾಲಯಗಳು ಇರುತ್ತವೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತೆ ಇರುತ್ತವೆ.

ಕೆ.ಆರ್. ಪೇಟೆ ತಾಲ್ಲೂಕು	245
ಮಳವಳ್ಳಿ ತಾಲ್ಲೂಕು	253
ಮಂಡ್ಯ ತಾಲ್ಲೂಕು	248
ಮದ್ದೂರು ತಾಲ್ಲೂಕು	235
ಪಾಂಡವಪುರ ತಾಲ್ಲೂಕು	276
ನಾಗಮಂಗಲ ತಾಲ್ಲೂಕು	487
ಶ್ರೀರಂಗಪಟ್ಟಣ ತಾಲ್ಲೂಕು	98
	1842

ಆ) ಈ ದೇವಾಲಯಗಳ ಅಭಿವೃದ್ಧಿ ನಿರ್ಮಾಣಕ್ಕೆ ಸರ್ಕಾರವು ಪ್ರತಿ ವರ್ಷ ಹಣ ಒದಗಿಸುತ್ತಿದ್ದು, 2001-2002ರಲ್ಲಿ ಕೆಳಕಂಡಂತೆ ಹಣ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ.

ವರ್ಷ	ದುರಸ್ತಿ ಯೋಜನೆ	ಸಂಸ್ಥೆಗಳ ಸಂಖ್ಯೆ	ನಿರ್ಮಾಣ ಯೋಜನೆ	ಸಂಸ್ಥೆ ಸಂಖ್ಯೆ
2001-2002	8,30,000	36	4,40,000	13

ಆರಾಧನಾ ಯೋಜನೆಯಡಿ ಮಂಡ್ಯ ಜಿಲ್ಲೆಗೆ ವಿಧಾನ ಸಭಾ ಕ್ಷೇತ್ರವಾರು ಹಂಚಿಕೆ ಮಾಡಲು ರೂ. 19,09,0089-00 ಗಳನ್ನು ಬಿಡುಗಡೆ ಮಾಡಲಾಗಿದೆ.

2002-2003ನೇ ಸಾಲಿನಲ್ಲಿ ಆರಾಧನಾ ಯೋಜನೆಯಡಿ ಮಂಡ್ಯ ಜಿಲ್ಲೆಗೆ 12,05,352-00 ಗಳನ್ನು ಬಿಡುಗಡೆ ಮಾಡಲಾಗಿದ್ದು, ಉಳಿದ ಮೊತ್ತವನ್ನು ಮಾರ್ಚ್ 2000ರ ಒಳಗಾಗಿ ಬಿಡುಗಡೆ ಮಾಡಲಾಗುವುದು.

ಇ) ಅಂತಹ ಪ್ರಸ್ತಾರ ಇರುವುದಿಲ್ಲ.

ಪಿರಿಯಾಪಟ್ಟಣ ಟೌನ್‌ನಲ್ಲಿ ಬೈಪಾಸ್ ರಸ್ತೆ ನಿರ್ಮಾಣ

1742 (1369) ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಿರಿಯಾಪಟ್ಟಣ ನಗರ ಮಧ್ಯ ಭಾಗದ ರಸ್ತೆಯನ್ನು ಮೇಲ್ದರ್ಜೆಗೇರಿಸಲಾಗಿದ್ದು ಅದನ್ನು ಪಿರಿಯಾಪಟ್ಟಣ ನಗರ ಪ್ರದೇಶದಿಂದ ಹೊರಗೆ ಬೈಪಾಸ್ ಮೂಲಕ ಹಾದುಹೋಗುವಂತೆ ಮಾಡಬೇಕಾದುದು ಅತಿ ಅವಶ್ಯಕವಾಗಿದೆ, ಈ ಬೈಪಾಸ್ ಬಗ್ಗೆ ಸರ್ವೆ ಕಾರ್ಯ ಮುಗಿಸಲಾಗಿದ್ದು, ಪ್ರಗತಿ ಕಂಡು ಬಂದಿರುವುದಿಲ್ಲ, ಈ ದಿಕ್ಕಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಆ) ಈ ಯೋಜನೆಗೆ ತಗಲುವ ವೆಚ್ಚ ಎಷ್ಟು;

ಇ) ಈ ಯೋಜನೆಯ ಪ್ರಾರಂಭ ಹಾಗೂ ಪೂರ್ಣಗೊಳಿಸುವುದು ಯಾವಾಗ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಮೈಸೂರು-ಬಂಟ್ವಾಳ ರಾಜ್ಯ ಹೆದ್ದಾರಿಯನ್ನು ಅಭಿವೃದ್ಧಿಪಡಿಸಲು ಕಾರ್ಯಸಾಧ್ಯತೆ ಮತ್ತು ವಿವರವಾದ ಯೋಜನಾ ವರದಿಯನ್ನು ತಯಾರಿಸುವ ಕಾರ್ಯವನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ಮತಿಯಿಂದ ತೆಗೆದುಕೊಳ್ಳಲಾಗಿದ್ದು, ಈ ಯೋಜನೆಯಲ್ಲಿ ಬೈಪಾಸ್ ಒದಗಿಸುವ ಬಗ್ಗೆಯೂ ಅಧ್ಯಯನ ನಡೆಸಲಾಗುತ್ತಿದೆ. ವರದಿಯನ್ನು ತಯಾರಿಸುವ ಕಾರ್ಯವು ಪ್ರಗತಿಯಲ್ಲಿದೆ.

ವರದಿ ಬಂದ ನಂತರ ಕಾರ್ಯಸಾಧ್ಯತೆಯನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಆ) ಯೋಜನಾ ವರದಿ ಬಂದನಂತರ ಇದರ ಅಂದಾಜು ಮೊತ್ತ ತಿಳಿಯುವುದು.

ಇ) ಯೋಜನಾ ವರದಿ ತಯಾರಿಕೆ ಹಂತದಲ್ಲಿದೆ. ವರದಿ ಬಂದನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಮೈಸೂರು ಜಿಲ್ಲೆಯಲ್ಲಿ ನಬಾರ್ಡ್ ಮತಿಯಿಂದ ಡಾಂಬರೀಕರಣ ಮಾಡಿದ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆ ನಿರ್ವಹಣೆ

1743 (1370) ಶ್ರೀ ಬಸವರಾಜು ಹೆಚ್.ಸಿ.(ಪಿರಿಯಾಪಟ್ಟಣ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಪಂಚಾಯತ್‌ಗೆ ಸೇರಿದ ರಸ್ತೆಗಳಲ್ಲಿ ಕೆಲವು ಮುಖ್ಯ ಜಿಲ್ಲಾ ರಸ್ತೆಗಳನ್ನು ನಬಾರ್ಡ್ ಯೋಜನೆಯಡಿಯಲ್ಲಿ ಕಳೆದ ಕೆಲವು ಸಾಲಿನಲ್ಲಿ ಡಾಂಬರೀಕರಣವನ್ನು ಲೋಕೋಪಯೋಗಿ ಇಲಾಖಾ ಮತಿಯಿಂದ ಮಾಡಲಾಗಿದ್ದು ಸದರಿ ರಸ್ತೆಗಳ ನಿರ್ವಹಣೆಯನ್ನು ಲೋಕೋಪಯೋಗಿ ಇಲಾಖೆಗೆ ಸೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ?

ಆ) ಹಾಗಿದ್ದಲ್ಲಿ, ಮೈಸೂರು ಜಿಲ್ಲೆಯಲ್ಲಿ ಎಷ್ಟು ಕಿ.ಮೀ. ರಸ್ತೆಯನ್ನು ಸೇರಿಸಲಾಗುವುದು: (ತಾಲ್ಲೂಕುವಾರು ರಸ್ತೆವಾರು ಮಾಹಿತಿ ನೀಡುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ನಬಾರ್ಡ್ ಯೋಜನೆಯಡಿ ಲೋಕೋಪಯೋಗಿ ಇಲಾಖೆಯ ಮತಿಯಿಂದ ಅಭಿವೃದ್ಧಿ ಪಡಿಸಲಾದ ಗ್ರಾಮೀಣ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಯಿಂದ ನಿರ್ವಹಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ರಾಜ್ಯದಲ್ಲಿನ ಸುಮಾರು 10,000 ಕಿಮೀ ಉದ್ದದ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. ಈ ಬಗ್ಗೆ ಸರ್ಕಾರ ಇನ್ನೂ ಅಂತಿಮ ನಿರ್ಧಾರ ಕೈಗೊಂಡಿರುವುದಿಲ್ಲ.

ಪಿರಿಯಾಪಟ್ಟಣ ತಾಲ್ಲೂಕಿನ ಲಿಂಗಾಪುರ ಗಿರಿಜನ ಹಾಡಿಯ ಗಿರಿಜನರಿಗೆ ಜಮೀನು ಮಂಜೂರಾತಿ

1745 (2343) ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಿರಿಯಾಪಟ್ಟಣ ತಾಲ್ಲೂಕು ದೊಡ್ಡ ಹೊಸೂರು ಲಿಂಗಾಪುರ ಗಿರಿಜನ ಹಾಡಿಯಲ್ಲಿರುವ ಸರ್ವೆ ನಂಬರ್ 1 ರಿಂದ 35 ರವರೆಗಿನ ಜಮೀನುಗಳನ್ನು ಗಿರಿಜನರಿಗೆ ಮಂಜೂರು ಮಾಡಲು ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;